ರಾಜ್ಯದಲ್ಲಿ ಅನಧಿಕೃತ ಅರಣ್ಯ ಜಮೀನನ್ನು ಸಕ್ರಮಗೊಳಿಸುವುದು

1919 (2189) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅರಣ್ಯ ಜಮೀನಿನಲ್ಲಿ ಅನಧಿಕೃತವಾಗಿ ಸಾಗುವಳಿ ಮಾಡುತ್ತಿರುವ ಹಾಗೂ ಅನಧಿಕೃತವಾಗಿ ಮನೆ ಕಟ್ಟಿಕೊಂಡಿರುವವರುಗಳಿಗೆ ಅದೇ ಸ್ಥಳವನ್ನು ಖಾಯಂಗೊಳಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು;

ಶ್ರೀ ಕೆ.ಹೆಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಸಚಿವರು) :

ಅ) ಕೇಂದ್ರ ಸರ್ಕಾರದ ನಿರ್ದೇಶನದ ಅನ್ವಯ 27-4-1978ರ ನಂತರ ಆಗಿರುವ ಎಲ್ಲಾ ಒತ್ತುವರಿಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ದಿನಾಂಕದ ಹಿಂದೆ ಒತ್ತುವರಿಯಾಗಿರುವ ಪ್ರಕರಣಗಳಲ್ಲಿ 14,848 ಹೆಕ್ಟೆರು ಪ್ರದೇಶಗಳನ್ನು ಸಕ್ರಮಗೊಳಿಸಲು ಕೇಂದ್ರ ಸರ್ಕಾರವು ಅನುಮೋದನೆ ನೀಡಿದೆ.

ಶಿವಮೊಗ್ಗ ಕ್ಷೇತ್ರದ ಗಾಜನೂರು ಹಾಗೂ ಭದ್ರಾ ಅಣೆಕಟ್ಟೆ ಪ್ರದೇಶವನ್ನು ಪ್ರವಾಸಿ ಕೇಂದ್ರವನ್ನಾಗಿಸುವುದು.

1921 (2197) ಶ್ರೀ ಚಂದ್ರಶೇಖರಪ್ಪ.ಹೆಚ್.ಎಂ. (ಶಿವಮೊಗ್ಗ) ಮಾನ್ಯ ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ಕ್ಷೇತ್ರದಲ್ಲಿ ಬರುವ ಗಾಜನೂರು ಅಣೆಕಟ್ಟಿನ ಪ್ರದೇಶವನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ?

ಆ) ಭದ್ರಾ ಅಣೆಕಟ್ಟಿನ (ಬಿ.ಆರ್.ಪಿ) ಪ್ರದೇಶದ ವ್ಯಾಪ್ತಿಯಲ್ಲೂ ಕೂಡ ಪ್ರವಾಸಿ ಕೇಂದ್ರವನ್ನಾಗಿ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆಗಳಿವೆಯೇ?

ಶ್ರೀ ಡಿ.ಬಿ.ಇನಾಂದಾರ್ (ಪ್ರವಾಸೋದ್ಯಮ ಮತ್ತು ತಂತ್ರಜ್ಞಾನ ರಾಜ್ಯ ಸಚಿವರು):

ಅ) ಇಲ್ಲ

ಆ) ಕೇಂದ್ರ ನೆರವಿನ ಯೋಜನೆಯಡಿ ಭದ್ರಾ ವನ್ಯಜೀವಧಾಮದಲ್ಲಿ ಪರಿಸರ ಪ್ರವಾಸೋದ್ಯಮ ಸೌಲಭ್ಯವನ್ನು ಮೆ: ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆಗಳ ಮೂಲಕ ನಿರ್ವಹಿಸಲು ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಸದರಿ ಸೌಲಭ್ಯಕ್ಕೆ ನಿವೇಶನ ಪಡೆದುಕೊಳ್ಳಲು ಅರಣ್ಯ ಇಲಾಖೆ ವತಿಯಿಂದ ಆಕ್ಷೇಪಣಾ ರಹಿತ ಪತ್ರವನ್ನು ನಿರೀಕ್ಷಿಸಲಾಗುತ್ತಿದೆ.

ರಾಷ್ಟ್ರೀಯ ಹೆದ್ದಾರಿ ಸಂಖ್ಯೆ 206ರ ಕಾಮಗಾರಿ

1922 (2200) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಷ್ಟ್ರೀಯ ಹೆದ್ದಾರಿ ಸಂಖ್ಯೆ - 206 ರಲ್ಲಿ ಇಲ್ಲಿಯವರೆಗೂ ಎಷ್ಟು ಕಿಮೀ ಕಾಮಗಾರಿ ಆಗಿರುತ್ತದೆ; ಇನ್ನೂ ಆಗಬೇಕಾದ ಕೆಲಸದ ವಿಸ್ತೀರ್ಣವೆಷ್ಟು;